ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ಸರ್ಕಾರದ ವತಿಯಿಂದ ಒದಗಿಸಲಾದ ಪಡಿತರವು ಸರಿಯಾದ ಸಮಯಕ್ಕೆ ತಲುಪಿಸದೆ ಇರುವ ಕುರಿತು

ಶ್ರೀ ಹೆಚ್.ಎಂ.ರಮೇಶಗೌಡ(ವಿಧಾನಸಭೆಯಿಂದಚುನಾಯಿತರಾದವರು):-

133 (135) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಲಾಕ್‌ಡೌನ್ ಸಮಯದಲ್ಲಿ ಬಡವರಿಗೆ ಸರ್ಕಾರದ ವತಿಯಿಂದ ಒದಗಿಸಲಾದ ಪಡಿತರವು ಸೂಕ್ತ ಫಲಾನುಭವಿಗಳಿಗೆ ಸೂಕ್ತ ಸಮಯಕ್ಕೆ ಸಿಗದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಸೂಕ್ತ ಫಲಾನುಭವಿಗಳಿಗೆ ಪಡಿತರವು ಸಿಗದೇ ದಲ್ಲಾಳಿಗಳ ಪಾಲಾಗುತ್ತಿರುವುದನ್ನು ತಡೆಯಲು ಪಡಿತರ ವ್ಯವಸ್ಥೆಯ ಪಾರದರ್ಶಕತೆ ಕಾಪಾಡಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಅತ್ಯಂತ ಕಡುಬಡವರಿಗೆ ಅಂತ್ಯೋದಯ ಯೋಜನೆಯಡಿ ನೀಡುವ ಪಡಿತರವು ಸಾಲದೆ ಅವರ ದೈನಂದಿನ ಜೀವನ ನಿರ್ವಹಣೆ ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿಯವರಿಗೆ ಹೆಚ್ಚಿನ ಸೌಲಭ್ಯ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಪಡಿತರ ವ್ಯವಸ್ಥೆಯಲ್ಲಿ ಅಂತ್ಯೋದಯ, ಬಿಪಿಎಲ್, ಎಪಿಎಲ್ ಪಡಿತರ ಚೀಟಿಯ ಸಾರ್ವಜನಿಕರ ಆರ್ಥಿಕ ಪರಿಸ್ಥಿತಿ ಆಧರಿಸಿ ನೀಡಿರುವಂತೆ ರಾಜ್ಯದಲ್ಲಿರುವ ವಿಶೇಷ ಚೇತನರಿಗೆ, ವಿಧವೆಯರಿಗೆ ಹಾಗೂ ಇತರರಿಗೆ ವಿಶೇಷ ಪಡಿತರ ಚೀಟಿ ವಿತರಿಸಿ ಸೌಲಭ್ಯ ನೀಡುವ ಯೋಜನೆ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)